(5.) ಕಂಟ್ರಾಕ್ಟ್ದಾರನು ಯಾವನಾದರೂ ಖಿಸ್ತು ವಾಯಿದೆಗೆ ಸರಿಯಾಗಿ ಮೊಬಲಗು ಪಾವತಿ ಮಾಡದೇ ಹೋದ್ದಪ್ಪಿದರೆ ಫಾರೆಸ್ಟ್ ಹುಟ್ಟುವಳಿಯನ್ನು 1891ನೇ ಇಸವಿ ಏಪ್ರಿಲ್ 30ನೇ ತಾರೀಖಿನ ವರಿಗಿನ ಉಳಿದ ಕಾಲಕ್ಕೆ ಜಮಾಯಿಸುವ ಹಕ್ಕುದಾರಿಯು ಫಾರೆಸ್ಟ್ ಇಲಾಖೆಯವರಿಂದ ಪುನಹ ವಿಕ್ರಯಿಸಲ್ಪಡುವದು ಅಥವಾ ಅವಾನಿಯಲ್ಲಿ ರೂಢಿಸಲ್ಪಡುವದು, ಪರಂತು ಹೊಟ್ಟಿಹೋದ ಕಂಟ್ರಾಕ್ಟ್ದಾರನು ಅದರಿಂದ ಉಂಟಾಗುವ ಯಾವ ನಷ್ಟಕ್ಕಾಗಲಿ ಗುರಿಯಾಗಿರತಕ್ಕದ್ದು.

(6.) ಅಮಲ್ದಾರ್ರುಗಳಿಂದ ಮಾಡಲ್ಪಟ್ಟ ಹರಾಜುಗಳ ಪೈಕಿ ಫ್ರೆಂಚ್ರಾಕ್ಸ್ ಸಬ್ ಡಿವಿಜ್ಞಗೆ ಕೇರಿದ ತಾಲ್ಲೂಕುಗಳದು ಸಬ್ ಡಿವಿಜ್ ಆಫಿಸರವರಲ್ಲಿಯೂ ಇತರ ತಾಲ್ಲೂಕುಗಳದು ಮೈಸೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರವರಲ್ಲಿಯೂ ಮಂಜೂರಾತಿಗೆ ವಳಪಟ್ಟು ಯಿರತಕ್ಕದ್ದು.

ಆರ್. ಬಿ. ವ್ಯೋಮರ್,
ಫಾರ್ ಡೆಪ್ಯೂಟಿ ಕಮ್ಮಿಷನರ್.

ಪ್ರಕಟನೆ.

ತಾರೀಖು 30ನೇ ಏಪ್ರಿಲ್ 1890.

ಈ ಕೆಳಗೆ ನಮೂದಾಗುವ ಆನೆಗಳು ಮತ್ತು ಹರಾಜ್ ತಾರೀಖು ವರಿಗೆ ಹಿಡಿಯಲ್ಪಡುವ ಆನೆಗಳು ಸಹ 1890ನೇ ಇಸವಿ ಜೂನ್ ತಾರೀಖು 16ರಲ್ಲು ಮೈಸೂರಿನಿಂದ 20 ಮೈಲಿ ಫಾಸಲೆಯಲ್ಲಿ ಯಿರುವ ಹೆಗ್ಗಡದೇವನಕೋಟೆ ತಾಲ್ಲೂಕು ಹಂಪಾಪುರದ ಮೊಕ್ಕಾಂನಲ್ಲಿ ಫಾರೆಸ್ಟ್ ಅಸಿಸ್ಟೆಂಟ್ ಕರ್ಸರ್ವೇಟರವರಿಂದ ಬಹಿರಂಗವಾದ ಹರಾಜ್ ಮೂಲಕ ವಿಕ್ರಯಿಸಲ್ಪಡುತ್ತೆ.

ನಂ.	ಹೆಸರು.	ಜಾತಿ.	ಯತ್ತರ ಅಡಿ	ಅಂಗುಲ.	ಹಿಡಿದ ತಾರೀಖು.	ಏರು.
1	ನರಸುಹ್ಮ ..	ಗಂಡು	6	6	21—2—90	
2	ಚಂದ್ರಶೇಖರ ..	ಡಿಟೋ	4	9	14—3—90	
3	ವರಲಕ್ಷ್ಮಿ ..	ಹೆಣ್ಣು	6	0	ಡಿಟೋ	
4	ಗಜಲಕ್ಷ್ಮಿ ..	ಡಿಟೋ	7	6	ಡಿಟೋ	

ಪರತ್ತುಗಳು—ಸರ್ಕಾರದ ಹರಾಜ್ ಖೈದಾದ ಕೂಡ್ಲೆ ಚಡ ದರಖಾಸ್ತುದಾರನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂ ಪಾಯಿ ಶೇವಣಿಯನ್ನ ಪಾವತಿ ಮಾಡತಕ್ಕದ್ದು, ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳ ವಳಗಾಗಿ ಪಾವತಿ ಯಿಂದ ಆನೆಯನ್ನು ತೆಗದುಕೊಂಡು ಹೋಗತಕ್ಕದ್ದು, ಇದಕ್ಕೆ ತಪ್ಪಿದಲ್ಲಿ ಶೇವಣಿ ಮೊಬಲಗು ಸರಕಾರಕ್ಕೆ ದಾಖಲ್ಮಾಡಿಕೊಳ್ಳಲಾಗುತ್ತೆ, ಮತ್ತು ಸದರೀ ಆನೆಗಳು ಪುನಹ ಹರಾಜು ಮಾಡುವದರಲ್ಲಿ ಪೊರ್ಟಾಗ ಬಹುದಾವ ಲುಕ್ಸಾನಿಗೆ ಮೊದಲ್ ದರಖಾಸ್ತುದಾರನ್ನ ಗುರಿಮಾಡಲಾಗುತ್ತೆ, ನಫೆ ಬಂದಲ್ಲಿ ದರಖಾಸ್ತುದಾರನಿಗೆ ಕೊಡಲಾಗುವದಿಲ್ಲ. ದರಖಾಸ್ತುದಾರರು ಅವರು ಪಡಕೊಂಡ ಆನೆಗಳಿಗೆ ಹರಾಜ್ ತಾರೀಖು ಲಾಗಾಯತು ತಗಲುವ ಖರ್ಚು ವಹಿಸಬೇಕು.

ಬಿ. ರಾಮಸ್ವಾಮಯ್ಯರ್,
ಆಫಿಸಿಯೇಟಿಂಗ್ ಅಸಿಸ್ಟೆಂಟ್ ಕರ್ಸರ್ವೇಟರ್.

ಹಾಸನ ಡಿಸ್ಟ್ರಿಕ್ಟ್.

ಸ್ರ್ 1890ನೇ ಇಸವಿ 21ನೇ ಏಪ್ರಿಲ್.

ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ.

ಹಾಸನ ಡಿಸ್ಟ್ರಿಕ್ಟ್ ಚನ್ನರಾಯಪಟ್ಟ್ಣ ತಾಲ್ಲೂಕಿನಲ್ಲಿ ಕುರಂಗದ ಕಲ್ಲುಗಳನ್ನ ಜಪ್ತಾಯಿಸಿಕೊಳ್ಳತಕ್ಕ ಹಕ್ಕುದಾರಿಯು ಚನ್ನರಾಯಪಟ್ಣ ತಾಲ್ಲೂಕು ಕಛೇರಿಯಲ್ಲಿ ಸ್ರ್ 1890ನೇ ಇಸವಿ ಮೇ ತಾರೀಖು 19ನೇ ದಿವಿ 11 ಘಂಟೆಗೆ ಪ್ರಾರಂಭಿಸಿ ಬಹಿರಂಗವಾಗಿ ಹರಾಜು ಮಾಡಲ್ಪಡುವದು.

2. ಅಮಲ್ದಾರ್ರು ಅಥವಾ ಶಿರಸ್ತೇದಾರ್ರು ಹರಾಜು ಮಾಡಿಸುವರು.

3. ಈ ಹರಾಜಿನ ಚಡ ದರಖಾಸ್ತು ಹಾಸನ ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡುವ ಪರಿಯಂತ ಖಾಯಮಾದ್ದಾಗಿ ತಿಳಿದುಕೊಳ್ಳ ಕೂಡದು.

4. ಈ ಇಜಾರೆಯು ಸ್ರ್ 1891ನೇ ಇಸವಿ ಮಾರ್ಚಿ 31ರ ವರಿಗೆ ಜಾರಿಯಲ್ಲಿ ತರತಕ್ಕದ್ದು.

393

5. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಕೇಕಡಾ 25 ರೂಪಾಯಿನಂತೆ ಆಗುವ ಮೊಬಲಗನ್ನ ಡಿಪಾಜಿಟ್ ಯಿಡಬೇಕಲ್ಲದೆ ಹರಾಜು ಮಂಜೂರ್ಮಾಡಲ್ಪಟ್ಟ ಸಂಗತಿ ಡೆಪ್ಯುಟಿ ಕಮ್ಮಿಷನರವರಿಂದ ಕ್ರಯದಾರನಿಗೆ ತಿಳಿಸಲ್ಪಟ್ಟ ತಾರೀಖು ಮೊದಲು 7 ದಿವಸದ ಒಳಗಾಗಿ ಕ್ರಯದ ಪಟ್ಟು ಮೊಬಲಗಿನ ಮೇಲೆ ರೂಪಾಯಿ ಬಂದಕ್ಕೆ ಬಂದಾಣೆಯಂತೆ ಆಗುವ ಲೋಕಲ್‌ಸೆಸ್ ದೇ ಖೀಲ್ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಹಾಂಗೆ ಡಿಪಾಜಿಟ್ ಯಿಟ್ಟ ಮೊಬಲಗು ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುವದು. ಹಾಂಗೆ ಡಿಪಾಜಿಟ್ ಮೊಬಲಗು ಹಾಜರ್ಮಾಡದಿದ್ದರೂ ಅಥವಾ ಬಾಕಿ ಕ್ರಯದ ಮೊಬಲಗು ಪಾವತಿ ಮಾಡದಿದ್ದರೂ ಹಕ್ಕುದಾರಿಯು ಅವ್ವಲ್ ಕ್ರಯದಾರನ ಖರ್ಚಿಗೂ ಮತ್ತು ಲುಕ್ಸಾನಿಗೂ ವಳಪಟ್ಟು ಪುನಹ ವಿಕ್ರಯಿಸಲ್ಪಡುವದು.

6. ಹರಾಜು ಷರತ್ತುಗಳು.

(a) ಹಿಡುವಳಿ ಜಮೀನಿನಲ್ಲಿ ಯಿರತಕ್ಕ ಕಲ್ಲುಗಳನ್ನು ತೆಗದುಕೊಳ್ಳಬೇಕಾದರೆ ಹಿಡುವಳಿದಾರನ ಸಮ್ಮತಿಯನ್ನ ಪಡಿಯಬೇಕು, ಜಮೀನು ಹಿಡುವಳಿದಾರನು ತನ್ನ ಕಲ್ಲುಗಳನ್ನು ಸ್ವಂತ ಪ್ರಯೋಜನಕ್ಕಾಗಿ ತೆಗದುಕೊಳ್ಳಲೂ ಕೂಡದು ಇಜಾರದಾರನಿಗೆ ಮಾರಬೇಕೇ ಹೊರ್ತು ಇತರ ಜನಗಳಿಗೆ ಮಾರಲೂ ಕೂಡದು.

(b) ಇಜಾರೇದಾರನು ಹುಲ್ಲುಬನ್ನಿ ಇಜಾರೆದಾರರ ಚಕಾವು ಹಕ್ಕಿನಲ್ಲಿ ಪ್ರವೇಸಿಸ ಕೂಡದು.

(c) ಬಂಜರ್ ಜಮೀನುಗಳು ಸಾಗುವಳಿ ಬಗ್ಯೆ ದರಖಾಸ್ತು ಬಂದಲ್ಲಿ ಆ ಪ್ರಕಾರ ಸಾಗುವಳಿಗೆ ಕೊಟ್ಟು ಬಿಡುವದಕ್ಕೆ ಕುರಂಗದ ಇಜಾರೆದಾರನು ಅಡ್ಡಿ ಹೇಳ ಕೂಡದು, ಅಂಥಾ ಜಮೀನುಗಳಲ್ಲಿ ಕುರಂಗದ ಕಲ್ಲುಗಳನ್ನ ತೆಗದುಕೊಳ್ಳತಕ್ಕ ಹಕ್ಕು ಮಾತ್ರ ಇಜಾರೇದಾರನಿಗೆ ವುಳದಿರುತ್ತೆ.

(d) ಇಜಾರೆದಾರನು ಕಲ್ಲುಗಳಿಗೋಸ್ಕರ ಜಮೀನುಗಳನ್ನು ಆಗಿಯಕೂಡದು. ಬಂದು ನೇಳೆ ಹಾಗೆ ಆಗದಲ್ಲಿ ಆ ಗುಂಡಿಗಳನ್ನ ತಕ್ಷಣ ಮುಚ್ಚಿ ಬಿಟ್ಟು ಸಾಗುವಳಿಗೆ ಜಮೀನು ಲಾಯಕ್ ಯಿರುವ ಹಾಗೆ ಮಾಡಬೇಕು.

ಸಿ. ಮಾದಯ್ಯ,
ಡೆಪ್ಯುಟಿ ಕಮ್ಮಿಷನರ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನ್‌ಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ಧರ್ಮಾರ್ಥವಾಗಿ ಗವರ್ಮೆಂಟ್ ಆಫಿಸರಿಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತೆಗದುಕೊಳ್ಳುವಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ 3—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 7—4—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 14—0—0; ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಬದಗಿಸಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ 4—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 9—4—0; ಬಂದು ಪೌಂವುಳ್ಳ ಡಬ್ಬಿಗೆ 17 ರೂ. 8 ಆಣೆ, ಈ ಔಷಧವು ಕಲ್ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ಯ ವ ನೇಟೀವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ, ಸದರೀ ಕಮ್ಮತಿನೊಂದಿಗೆ ದರ 4 ಔನ್ಸ್ ತಗರದ ಡಬ್ಬಿಗೆ 4 ಆಣೆಯೂ, 8 ಔನ್ಸ್ ತಗರದ ಡಬ್ಬಿಗೆ 8 ಆಣೆ ಟಪ್ಪಾಲ್ ಹಾಸಲು, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.

Mysore Govt. Central Press, Bangalore—1890.